# ಕರ್ನಾಟಕ ಸರ್ಕಾರದ ನಡಾವಳಿಗಳು.

ವಿಷಯ:- ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು ಹಾಗೂ ಮಾನ್ವಿ ತಾಲ್ಲುಕುಗಳಲ್ಲಿ ವಿವಿಧ ಕಾಮಗಾರಿಗಳಗೆ ಸಂಬಂಧಿಸಿದಂತೆ ಲೆಕ್ಕಪತ್ರ ಸಲ್ಲಿಸದೇ ಸರ್ಕಾರಿ ಹಣ ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ ಶಿಸ್ತು ಕ್ರಮ.

**ಓದಲಾಗಿದೆ:-**

(1) ಸರ್ಕಾರದ ಕಾರಣ ಕೇಳುವ ಪತ್ರ ಸಂ. ಕೃತೋಇ 06 ಕೃಪವಿ 2010, ದಿನಾಂಕ: 15-10-2010

(2) ಸರ್ಕಾರದ ಕಾರಣ ಕೇಳುವ ಪತ್ರ ಸಂ. ಕೃತೋಇ 67 ಕೃಪವಿ 2010, ದಿನಾಂಕ: 01-01-2011

(3) ಶ್ರೀ ಟಿ.ಎಸ್.ರುದ್ರೇಶಪ್ಪ, ಹಿಂದಿನ ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳು ರಾಯಚೂರು ಇವರ ಲಿಖಿತ ಹೇಳಿಕೆ ದಿನಾಂಕ: 10-01-2011

(4) ಶ್ರೀ ಬಿ. ಮಂಜಣ್ಣ, ಸಹಾಯಕ ಕೃಷಿ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು ಇವರ ಲಿಖಿತ ಹೇಳಿಕೆ ದಿನಾಂಕ: 15-12-2010

(5) ಶ್ರೀ ಸಿ.ಆರ್. ಕಡಿವಾಳ್, ಹಿಂದಿನ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ರಾಯಚೂರು ಇವರ ಲಿಖಿತ ಹೇಳಿಕೆ ದಿನಾಂಕ: 18-11-2010

(6) ಶ್ರೀ ಬಿ.ವಿರೂಪಾಕ್ಷಪ್ಪ, ಹಿಂದಿನ ಸಹಾಯಕ ಕೃಷಿ ಅಧಿಕಾರಿಗಳು, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು, ಇವರ ಲಿಖಿತ ಹೇಳಿಕೆ ದಿನಾಂಕ: 08-11-2010

(7) ಶ್ರೀ ಹನುಮಂತಪ್ಪ, ಹಿಂದಿನ ಸಹಾಯಕ ಕೃಷಿ ಅಧಿಕಾರಿಗಳು, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು, ಇವರ ಲಿಖಿತ ಹೇಳಿಕೆ ದಿನಾಂಕ: 08-11-2010.

**ಪ್ರಸ್ತಾವನೆ:-**

ಮೇಲೆ ಕ್ರ.ಸಂ. (1) ಹಾಗೂ (2)ರಲ್ಲಿ ಓದಲಾದ ಸರ್ಕಾರದ ಕಾರಣ ಕೇಳುವ ಪತ್ರಗಳಲ್ಲಿ ರಾಯಚೂರು ಜಿಲ್ಲೆಯ ಮಾನ್ವಿ ಹಾಗೂ ರಾಯಚೂರು ತಾಲ್ಲೂಕುಗಳ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿನ ವಿವಿಧ ಯೋಜನೆಗಳಡಿಯಲ್ಲಿ ಹಣ ತೆಗೆದು ಕಾಮಗಾರಿಗಳನ್ನು ಸಮರ್ಪಕವಾಗಿ ಕೈಗೊಳ್ಳದೇ, ಹಾಗೂ ಲೆಕ್ಕಪತ್ರಗಳನ್ನು ಸಲ್ಲಿಸದೇ, ಹಣ ದುರಪಯೋಗಪಡಿಸಿಕೊಂಡಿರುತ್ತಾರೆಂಬ ಅಪಾದನೆಗಳಗೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ, ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮಾವಳಿ 1957ರ ನಿಯಮ 11ರಡಿಯಲ್ಲಿ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಿ, ಸದರಿ ಆರೋಪಗಳ ಬಗ್ಗೆ ಏನಾದರೂ ಲಿಖಿತ ಹೇಳಿಕೆ ಇದ್ದರೆ, ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿತ್ತು.

(1) ಶ್ರೀ ಟಿ.ಎಸ್. ರುದ್ರೇಶಪ್ಪ, ಹಿಂದಿನ ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳು ರಾಯಚೂರು.

(2) ಶ್ರೀ ಡಿ. ಮಂಜಣ್ಣ, ಸಹಾಯಕ ಕೃಷಿ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು.

(3) ಶ್ರೀ ಸಿ.ಆರ್. ಕಡಿವಾಳ, ಹಿಂದಿನ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು.

(4) ಶ್ರೀ ಬಿ. ವಿರೂಪಾಕ್ಷಪ್ಪ, ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು.

(5) ಶ್ರೀ ಹನುಮಂತಪ್ಪ, ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು.

ಮೇಲೆ ಕ್ರ.ಸಂ. (3) ರಿಂದ (7)ರ ವರೆಗೆ ಓದಲಾದ ಪತ್ರಗಳಲ್ಲಿ ಈ ಮೇಲ್ಕಂಡ ಎಲ್ಲಾ ಅಧಿಕಾರಿಗಳು ತಮಗೆ ಜಾರಿ ಮಾಡಿದ ಅಪಾದನೆ ಪಟ್ಟಿಗೆ ತಮ್ಮ ಲಿಖಿತ ಹೇಳಿಕೆ ನೀಡಿ, ತಮ್ಮ ಮೇಲಿರುವ ಆರೋಪಗಳನ್ನು ಅಲ್ಲಗೆಳೆದಿದ್ದಾರೆ. ಸದರಿ ಅಧಿಕಾರಿಯವರು ನೀಡಿರುವ ಹೇಳಿಕೆಗಳನ್ನು ಪರಿಶೀಲಿಸಲಾಗಿ, ಅವರ ಹೇಳಿಕೆಯಲ್ಲಿ ಪರಿಗಣಿಸಬಹುದಾದಂತಹ ಅಂಶಗಳು ಇಲ್ಲವಾದ್ದರಿಂದ, ಹಾಗೂ ಅವರೆಲ್ಲರೂ ತಮ್ಮ ಮೇಲಿರುವ ಆರೋಪಗಳನ್ನು ತಳ್ಳಿ ಹಾಕಿರುವುದರಿಂದ ಪ್ರಕರಣದಲ್ಲಿ ಸತ್ಯಾ-ಸತ್ಯತೆಯನ್ನು ಕಂಡು ಕೊಳ್ಳುವ ದೃಷ್ಟಿಯಿಂದ ಮೇಲೆ ಕಾಣಿಸಿರುವ ಎಲ್ಲಾ ಅಧಿಕಾರಿಗಳ ವಿರುದ್ಧ ಕೆ.ಸಿ.ಎಸ್. (ಸಿ.ಸಿ.ಎ) ನಿಯಮಾವಳಿ, 1957 ನಿಯಮ 13ನ್ನು ಓದುವುದರೊಂದಿಗೆ, ಅದೇ ನಿಯಮಾವಳಿ ನಿಯಮ 11ರಲ್ಲಿ ನಿರೂಪಿಸಿರುವಂತೆ ನಿವೃತ್ತ ಜಿಲ್ಲಾ ಮತ್ತು ಸೇಶನ್ಸ ನ್ಯಾಯಾಧೀಶರಿಂದ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃತೋಇ 06 ಕೃಪವಿ 2010,**

**ಬೆಂಗಳೂರು, ದಿನಾಂಕ: 30ನೇ ಜುಲೈ 2011.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು ಮತ್ತು ಮಾನ್ವಿ ತಾಲ್ಲೂಕುಗಳಲ್ಲಿನ ವಿವಿಧ ಯೋಜನೆಗಳಡಿ, ಹಣ ತೆಗೆದು ಕಾಮಗಾರಿಗಳನ್ನು ಕೈಗೊಳ್ಳದೇ, ಮತ್ತು ಕಾಮಗಾರಿಗಳಿಗೆ ಸಂಬಂಧಿಸಿದಂತೆ ಲೆಕ್ಕಪತ್ರ ಸಲ್ಲಿಸದೇ ಅವ್ಯವಹಾರ ಎಸಗಿರುತ್ತಾರೆಂಬ ಆರೋಪಕ್ಕೆ ಸಂಬಂದಿಸಿದಂತೆ ಈ ಕೆಳಕಂಡ ಅಧಿಕಾರಿಗಳ ಮೇಲೆ ಕೆ.ಸಿ.ಎಸ್.(ಸಿ.ಸಿ.ಎ) ನಿಯಮ 11ರಡಿ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಕರ್ನಾಟಕ ಸರ್ಕಾರಿ, ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಉಪ ನಿಯಮ (5)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಡಿ.ವಿ. ಶೇಠ್, ನಿವೃತ್ತ ಜಿಲ್ಲಾ ಮತ್ತು ಸೇಶನ್ಸ ನ್ಯಾಯಾಧೀಶರು, ಧಾರವಾಡ ಇವರನ್ನು ಈ ಪ್ರಕರಣದಲ್ಲಿಯ ವಿಚಾರಣಾಧಿಕಾರಿಯಾಗಿ ನೇಮಿಸಲಾಗಿದೆ. ಸದರಿ ಪ್ರಕರಣದಲ್ಲಿ ಜಂಟಿ ಇಲಾಖೆ ವಿಚಾರಣೆ ನಡೆಸಿ ವರದಿ ನೀಡುವಂತೆ ಕೋರಿದೆ.

(1) ಶ್ರೀ ಟಿ.ಎಸ್. ರುದ್ರೇಶಪ್ಪ, ಹಿಂದಿನ ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳು ರಾಯಚೂರು.
(2) ಶ್ರೀ ಡಿ. ಮಂಜಣ್ಣ, ಸಹಾಯಕ ಕೃಷಿ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು.
(3) ಶ್ರೀ ಸಿ.ಆರ್. ಕಡಿವಾಳ, ಹಿಂದಿನ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು.
(4) ಶ್ರೀ ಬಿ. ವಿರೂಪಾಕ್ಷಪ್ಪ, ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು.
(5) ಶ್ರೀ ಹನುಮಂತಪ್ಪ, ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು.

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 11ರ ಉಪ ನಿಯಮ 5(ಸಿ) ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಅಧೀಕ್ಷಕರು ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳ ಕಚೇರಿ, ರಾಯಚೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

30/7/11

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

30/7/11

ಇವರಿಗೆ:-

1) ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) ಕರ್ನಾಟಕ, ಬೆಂಗಳೂರು.
2) ಆಯುಕ್ತರು ಕೃಷಿ/ ಜಲಾನಯನ ಅಭಿವೃದ್ಧಿ ಇಲಾಖೆ,
3) ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳು, ರಾಯಚೂರು.
4) ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳ ಕಚೇರಿ, ರಾಯಚೂರು.
5) ಶ್ರೀ ಡಿ.ವಿ. ಶೇಠ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಆದರ್ಶ ಸೈದಾಪೂರ ,ಧಾರವಾಡ ಧಾರವಾಡ ಜಿಲ್ಲೆ - 580008 ( ರಿಜಿಸ್ಟ್ರಿ ಅಂಚೆ ಮೂಲಕ)
6) ಅಧೀಕ್ಷಕರು, ಜಿಲ್ಲಾ ಜಲಾನಯನ ಅಭಿವೃದ್ಧಿ ಕಚೇರಿ, ರಾಯಚೂರು.
7) ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ ಅವರ ಆಪ್ತ ಕಾರ್ಯದರ್ಶಿಯವರಿಗೆ.
8) ಸಂಬಂಧಪಟ್ಟ ಅಧಿಕಾರಿಯವರಿಗೆ (ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು ರವರ ಮೂಲಕ,
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.